



ಅರುಣ ಪಿ. ಭಟ್ಟ

## ವಾರಭವಿಷ್ಯ: 03.08.2023ರಿಂದ 09.08.2023ವರೆಗೆ



**ಮೇಷ**

ನಿಮ್ಮ ಆತ್ಮವಿಶ್ವಾಸ ಬೆಳೆಯುತ್ತದೆ. ವೆಚ್ಚ ಏರಿದರೂ ಆದಾಯದಲ್ಲಿನ ಹೆಚ್ಚಳ ಖರ್ಚುಗಳನ್ನು ಸರಿದೂಗಿಸುತ್ತದೆ. ನಿಮ್ಮ ಅಭಿಪ್ರಾಯಗಳನ್ನು ಇತರರ ಮೇಲೆ ಹೇರಬೇಡಿ. ನಿಮ್ಮ ಮನೆಯಲ್ಲಿ ಸಾಮರಸ್ಯ ತರಲು ಕುಟುಂಬದವರ ನಿಕಟ ಸಹಕಾರದೊಂದಿಗೆ ಕೆಲಸ ಮಾಡಬೇಕು. ನಿಮ್ಮ ಸ್ಪರ್ಧಾತ್ಮಕ ಸ್ವಭಾವ ನೀವು ಸದಾ ಮುಂದೆ ಉಳಿಯಲು ಸಹಾಯ ಮಾಡುತ್ತದೆ. ಶುಭದಿನ 03. ಶ್ರೀ ದುರ್ಗಾ ಆರಾಧನೆ ಮಾಡಿರಿ.



**ವೃಷಭ**

ವಾರದ ಶುರುವಿನಿಂದಲೇ ವೃತ್ತಿಪರ ಜೀವನದಲ್ಲಿ ಉತ್ತಮ ಅವಕಾಶಗಳು ದೊರೆಯಲಿವೆ. ಅದರ ಫಲಿತವಾಗಿ ಸರಿಯಾದ ಸಮಯಕ್ಕೆ ಕೆಲಸ ಕಾರ್ಯಗಳು ಪೂರ್ಣಗೊಳ್ಳಲಿವೆ. ಮಕ್ಕಳಿಗೆ ಸಹಾಯ ಮಾಡಲಿದ್ದೀರಿ. ಕುಟುಂಬದಲ್ಲಿ ಹಲವು ಬದಲಾವಣೆ ತರುವ ಮೂಲಕ ಸಂತೋಷ ಉಂಟು ಮಾಡಲಿದ್ದೀರಿ. ಉದ್ಯೋಗ ಸ್ಥಳದಲ್ಲಿ ಹೆಚ್ಚು ತಾಳ್ಮೆಯಿಂದ ಕೆಲಸ ಮಾಡಿ. ಶುಭದಿನ 07. ಹನುಮಾನ್ ಚಾಲೀಸ್ ಓದಿರಿ.



**ಮಿಥುನ**

ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ ಮೂಡುತ್ತದೆ. ಅದಕ್ಕೆ ನಿಮ್ಮ ಕುಟುಂಬದ ಬೆಂಬಲವೂ ದೊರೆಯುತ್ತದೆ. ನಿಮ್ಮ ತಾಯಿಯವರ ಅನಾರೋಗ್ಯ ಆತಂಕಕ್ಕೆ ಗುರಿ ಮಾಡಬಹುದು. ಆದಾಯ ಮೂಲಗಳಿಂದ ಉತ್ತಮ ವರಮಾನ ಇರುತ್ತದೆ. ಇದರಿಂದ ನಿಮ್ಮ ಆತ್ಮವಿಶ್ವಾಸ ಹೆಚ್ಚಾಗುತ್ತದೆ ಸಂತೋಷ ಕೂಡ ಉಂಟಾಗುತ್ತದೆ. ಜೀವನಶೈಲಿ ಉತ್ತಮಗೊಳ್ಳುತ್ತದೆ. ಶುಭದಿನ 09. ಗಣಪತಿಗೆ ದೂರ್ವಾರ್ಚನೆ ಮಾಡಿರಿ.



**ಕಟಕ**

ನಿಮ್ಮ ಸಾಮರ್ಥ್ಯವನ್ನು ಸರಿಯಾದ ದಿಕ್ಕಿನಲ್ಲಿ ಬಳಕೆ ಮಾಡಿಕೊಳ್ಳುತ್ತೀರಿ. ಮುಂಬರುವ ದಿನಗಳಲ್ಲಿ ಅನುಕೂಲ ಆಗುತ್ತದೆ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಕುಟುಂಬದ ಸದಸ್ಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಸೋದರ ಸೋದರಿಯರ ಜತೆಗೆ ಅತಿ ಮುಖ್ಯವಾದ ವಿಚಾರಗಳನ್ನು ಚರ್ಚೆ ಮಾಡುತ್ತೀರಿ. ವಾರದ ಕೊನೆಗೆ ಕೆಲಸದಲ್ಲಿ ಪ್ರಗತಿ ಇದೆ. ಶುಭದಿನ 08. ವಿಷ್ಣು ಸಹಸ್ರನಾಮ ಓದಿರಿ.



**ಸಿಂಹ**

ವಾರದ ಮೊದಲ ಭಾಗದಲ್ಲಿ ದೂರದ ಪ್ರದೇಶಗಳಿಗೆ ತೆರಳುವ ಸಂಭವ. ಭೂಮಿಗೆ ಸಂಬಂಧಿಸಿದ ವ್ಯಾಜ್ಯಗಳನ್ನು ನಿವಾರಿಸಿಕೊಳ್ಳುವ ನಿಟ್ಟಿನಲ್ಲಿ ಹೆಚ್ಚು ಶ್ರಮ ಪಡಬೇಕಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಆಲೋಚನೆ ಮಾಡುತ್ತೀರಿ. ಈ ಮಧ್ಯೆ ನಿಮ್ಮ ವೈಯಕ್ತಿಕ ಸಂಬಂಧದಲ್ಲಿ ಕೆಲ ಗೊಂದಲ ಏರ್ಪಡುತ್ತದೆ. ಶುಭದಿನ 04. ಕಾಲಭೈರವನ ಸೇವೆ ಮಾಡಿರಿ.



**ಕನ್ಯಾ**

ನಿಮ್ಮ ಸಂಬಂಧಿಕರನ್ನು ಭೇಟಿ ಮಾಡುವ ಸಾಧ್ಯತೆ ಇದೆ. ಕೆಲ ಮುಖ್ಯವಾದ ವಿಚಾರಗಳನ್ನು ಅವರ ಜತೆ ಚರ್ಚೆ ಮಾಡಲಿದ್ದೀರಿ. ಉದ್ಯೋಗದಲ್ಲಿ ಒತ್ತಡ ಹೆಚ್ಚಾಗುವ ಸಾಧ್ಯತೆಯಿದೆ. ಕುಟುಂಬದ ವಿಚಾರದಲ್ಲಿ ತೆಗೆದುಕೊಳ್ಳಬೇಕಾದ ನಿರ್ಧಾರಕ್ಕೆ ಪೂರಕವಾಗಿ ಹಲವು ಅವಕಾಶಗಳು ದೊರೆಯಲಿವೆ. ಭೂಮಿ ಖರೀದಿಗೆ ಮನಸ್ಸು ಮಾಡುತ್ತೀರಿ. ಶುಭದಿನ 07. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ ಪಠಣ ಮಾಡಿರಿ.



**ತುಲಾ**

ವೃತ್ತಿಪರ ಜೀವನದಲ್ಲಿ ಉತ್ತಮವಾದ ಅವಕಾಶಗಳು ದೊರೆಯಲಿವೆ. ಕೌಟುಂಬಿಕ ವಿಷಯಗಳಲ್ಲಿ ಪ್ರಗತಿ ಕಾಣಲಿದೆ. ವ್ಯಾಪಾರದಲ್ಲಿ ಪ್ರಗತಿ ಕಾಣಿಸುತ್ತದೆ. ನಿಮ್ಮ ಆರೋಗ್ಯ ಕೂಡ ಉತ್ತಮವಾಗಿರುತ್ತದೆ. ಮಕ್ಕಳ ಪ್ರಗತಿ ನಿಧಾನ ಆಗುವುದರಿಂದ ಚಿಂತೆಗೆ ಕಾರಣವಾಗುತ್ತದೆ. ಕೆಲ ನಿರ್ದಿಷ್ಟ ಕೆಲಸಗಳನ್ನು ಪೂರೈಸಲು ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ. ಶುಭದಿನ 06. ದಕ್ಷಿಣಾಮೂರ್ತಿ ಸ್ತೋತ್ರ ಪಠಣ ಮಾಡಿರಿ.



**ವೃಶ್ಚಿಕ**

ಉದ್ಯೋಗಸ್ಥರು ನಿಮಗೆ ವಹಿಸಿದ ಕೆಲಸಗಳನ್ನು ಪೂರೈಸಲು ಯಶಸ್ವಿ ಆಗುತ್ತೀರಿ. ವ್ಯವಹಾರದ ಪ್ರಗತಿಗೆ ನಿಮ್ಮ ಶ್ರಮ ಅಗತ್ಯ. ನಿಮ್ಮ ಸಿಬ್ಬಂದಿಯ ಆತ್ಮಸ್ಥೈರ್ಯ ಹೆಚ್ಚಿಸುವಲ್ಲಿ ಸಫಲರಾಗುತ್ತೀರಿ. ಪ್ರೋತ್ಸಾಹ ನೀಡುತ್ತೀರಿ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ನೀಡಿದ ಸಂದರ್ಶನಗಳು ಯಶಸ್ಸು ಕಾಣುವ ಸಾಧ್ಯತೆಗಳಿವೆ. ಸಂಗಾತಿಯ ಭಾವನೆಗಳಿಗೂ ಗೌರವ ನೀಡಿ. ಶುಭದಿನ 09. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.



**ಧನಸ್ಸು**

ಹಣಕಾಸು ಹೂಡಿಕೆಯಲ್ಲಿ ಪ್ರಗತಿ ಕಾಣಲಿದ್ದೀರಿ. ಬಾಹ್ಯ ಚಟುವಟಿಕೆಗಳು ಈ ಹಿಂದಿನಂತೆಯೇ ನಡೆಯುತ್ತವೆ. ತಲೆನೋವು ಕಾಡಬಹುದು. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯಿಂದ ಕೆಲ ಗೊಂದಲ, ಆತಂಕ ಸೃಷ್ಟಿ ಆಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಗ್ರಹ ಸ್ಥಿತಿಗಳು ನಿಮಗೆ ಅನುಕೂಲಕರವಾಗಿ ಪರಿಣಮಿಸುತ್ತದೆ. ನಿಮ್ಮ ಆರೋಗ್ಯ ಚೆನ್ನಾಗಿರುತ್ತದೆ. ಶುಭದಿನ 06. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.



**ಮಕರ**

ವಾರದ ಶುರುವಿನಿಂದಲೇ ನಿಮ್ಮ ಅದೃಷ್ಟ ಚೆನ್ನಾಗಿದೆ. ನಿಮ್ಮ ಕೆಲಸಗಳನ್ನು ಪೂರ್ಣಗೊಳಿಸಲು ಹೆಚ್ಚು ಚಟುವಟಿಕೆಯಿಂದ ಕಾಣಿಸಿಕೊಳ್ಳುತ್ತೀರಿ. ತಂದೆಯ ಜತೆಗೆ ಮನಸ್ತಾಪ ಉದ್ಭವಿಸಬಹುದು. ಈ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಉದ್ಯೋಗ ನೇಮಕಾತಿಯ ಜವಾಬ್ದಾರಿಯ ಹೊತ್ತಿರುವವರು ಸಾಮರ್ಥ್ಯದ ಸದುಪಯೋಗ ಮಾಡಿಕೊಳ್ಳಬೇಕು. ಶುಭದಿನ 08. ಮಾರುತಿ ಗುಡಿಗೆ ಮುಖ ನೋಡಿದ ಎಣ್ಣೆ ನೀಡಿರಿ.



**ಕುಂಭ**

ವ್ಯಾಪಾರ ವ್ಯವಹಾರ ಮಾಡುತ್ತಿರುವವರು ಅದನ್ನು ಮುಂದಿನ ಹಂತಕ್ಕೆ ತೆಗೆದುಕೊಂಡು ಹೋಗಲು ಯತ್ನಿಸುತ್ತೀರಿ. ನಿಮ್ಮ ಶ್ರಮಕ್ಕೆ ಯಶಸ್ಸು ದೊರೆಯುತ್ತದೆ. ನಿಮ್ಮ ಆರೋಗ್ಯ ಚೆನ್ನಾಗಿರುತ್ತದೆ. ವೈವಾಹಿಕ ಜೀವನವು ಸಂತೋಷವಾಗಿ ಇರುತ್ತದೆ. ಉದ್ಯಮಿಗಳಾಗಿದ್ದಲ್ಲಿ ದೀರ್ಘಾವಧಿ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಆಸ್ತಿ ಬಿಕ್ಕಟ್ಟು ಉದ್ಭವಿಸುತ್ತದೆ. ಶುಭದಿನ 04. ಸುಬ್ರಹ್ಮಣ್ಯ ಜಪ ಮಾಡಿರಿ.



**ಮೀನ**

ನಿಮ್ಮ ಕೆಲಸ ಕಾರ್ಯಗಳನ್ನು ಇನ್ನಷ್ಟು ಒಪ್ಪ ಓರಣವಾಗಿ ಮಾಡಲು ಹೆಚ್ಚಿನ ಶ್ರಮ ಹಾಕುತ್ತೀರಿ. ಕೆಲವು ವ್ಯವಹಾರಗಳನ್ನು ಮಾಡುವಾಗ ಬಹಳ ಎಚ್ಚರಿಕೆಯಿಂದ ಇರಬೇಕಾಗುತ್ತದೆ. ಜತೆಗೆ ಸ್ವಚ್ಛತೆ ಕಡೆಗೆ ಹೆಚ್ಚಿನ ಗಮನ ನೀಡಬೇಕಾಗುತ್ತದೆ. ಅದನ್ನು ನಿರ್ಲಕ್ಷಿಸಿದಲ್ಲಿ ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ. ಮನೆಯಲ್ಲಿ ಸಂಭ್ರಮದ ವಾತಾವರಣ ಇರುತ್ತದೆ. ಶುಭದಿನ 05. ನವದುರ್ಗಾ ಆರಾಧನೆ ಮಾಡಿರಿ.